1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಜೆಎಂಎಫ್ ಸಿ , ನ್ಯಾಯಾಧೀಶರವರ

ನ್ಯಾಯಾಲಯ , ಚನ್ನಗಿರಿ .

ಸಿಸಿ ನಂ.**237/2017**

ಹೆಸರುಃ ಶಕುಂತಲಾ ಬಾಯಿ                                        ಚಾಸಾಃ 7

ಗಂಡಃ ಲೋಕೇಶ್ ನಾಯಕ್                                        ಫ್ರಾಸಾ: 9

ವಯಸ್ಸುಃ 45 ವರ್ಷ

ಉದ್ಯೋಗಃ ಗೃಹಿಣಿ

ವಾಸ ಸ್ಥಳಃ ಮರವಂಜಿ ಗ್ರಾಮ , ಚನ್ನಗಿರಿ ತಾಲ್ಲೂಕು.

ಸಾಕ್ಷಿಗೆ ದಿನಾಂಕಃ 14-08-2024 ರಂದು ಪ್ರಮಾಣ ವಚನ ಭೋಧಿಸಲಾಯಿತು

**ಮುಖ್ಯ ವಿಚಾರಣೆಃ** ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರವರಿಂದಃ

ಈ ಪ್ರಕರಣದ ಬಗ್ಗೆ ನನಗೆ ಯಾವುದೇ ಮಾಹಿತಿ ಇರುವುದಿಲ್ಲ. ಪೊಲೀಸರಿಗೆ ಯಾವುದೇ ಹೇಳಿಕೆಯನ್ನು ನೀಡಿರುವುದಿಲ್ಲ.

(ಈ ಹಂತದಲ್ಲಿ ಸಾಕ್ಷಿಯು ಹೇಳಿಕೆಗೆ ಪ್ರತಿಕೂಲ ಸಾಕ್ಷ್ಯ ನುಡಿದಿದ್ದರಿಂದ ಮಾನ್ಯ ಸಹಾಯಕರ ಸರ್ಕಾರಿ ಅಭಿಯೋಜಕರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯಾಗಿ ಪರಿಗಣಿಸಲು ಕೇಳಿಕೊಂಡಿದ್ದು, ಹೇಳಿಕೆಯನ್ನು ನೋಡಲಾಗಿ ಸಾಕ್ಷಿಯು ಹೇಳಿಕೆಗೆ ಪ್ರತಿಕೂಲ ಸಾಕ್ಷಿ ನುಡಿದಿರುವುದು ಕಂಡು ಬರುತ್ತದೆ. ಆದ್ದರಿಂದ ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀಸವಾಲು ಮಾಡಲು ಅನುಮತಿ ನೀಡಲಾಯಿತು.)

**ಪಾಟಿ ಸವಾಲುಃ ಮಾನ್ಯ ಸಹಾಯಕ ಸರ್ಕಾರಿ ಅಬಿಯೋಜಕರವರಿಂದಃ**

ನನ್ನ ತಂದೆ ಟಾಕ್ರಾ ನಾಯಕ ಇವರಿಗ ಇಬ್ಬರು ಹೆಂಡತಿಯರಿದ್ದು ಮೊದಲನೆ ಹೆಂಡತಿ ಹಾಲಿ ಬಾಯಿ ಎರಡನೆ ಹೆಂಡತಿ ನನ್ನ ತಾಯಿ ಭೀಮಾಬಾಯಿ ಇದ್ದು ಹಾಲಿಬಾಯಿ ರವರಿಗೆ ವಸಂತ ಬಾಯಿ ಮತ್ತು ಮಲ್ಲಿಕಾರ್ಜುನ ಎಂಬ ಇಬ್ಬರು ಮಕ್ಕಳಿದ್ದು ವಸಂತ ಬಾಯಿ ಮೃತಪಟ್ಟಿರುತ್ತಾರೆ,

------------ ನನ್ನ ತಮ್ಮ ಮಲ್ಲಿಕಾರ್ಜುನ ಮ್ಯುಟೇಷನ್ ದಾಖಲೆಯಲ್ಲಿ ನನ್ನ ಹೆಸರನ್ನು ಪೋರ್ಜರಿ ಮಾಡಿ ಆ ಮೂಲಕ ಸರ್ಕಾರಕ್ಕೆ ಮೋಸ ಮಾಡಿ ಅಜ್ಜಿಹಳ್ಳಿ ಕೆನರಾ ಬ್ಯಾಂಕ್

ಗೆ ಕೊಟ್ಟು ಸಾಲ ಪಡೆಯಲು ಪ್ರಯತ್ತಿಸಿರುತ್ತಾನೆ ಎಂದು ಈಗ ಓದಿ ಹೇಳಿ ಕೇಳಿದಂತೆ ದಿನಾಂಕಃ 23.04.2017 ರಂದು ಪೊಲೀಸರಿಗೆ ಹೇಳಿಕೆಯನ್ನು ನೀಡಿರುತ್ತೇನೆ ಎಂದರೆ ಸರಿಯಲ್ಲ ಅಲ್ಲಗಳೆದ ಹೇಳಿಕೆಯನ್ನು ನಿಪಿ.8 ಎಂದು ಗುರುತಿಸಲಾಯಿತು.

ಎಲ್ಲಾ ವಿಚಾರ ಗೊತ್ತಿದ್ದರೂ ಸಹ ಆರೋಪಿಗಳಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲು – ಆರೋಪಿತರ ಪರ ವಕೀಲರಿಂದ - ಇರುವುದಿಲ್ಲ.**

**ಮರು ವಿಚಾರಣೆ ಇಲ್ಲ.**

**( ತೆರೆದ ನ್ಯಾಯಾಲಯದಲ್ಲಿ ಸಾಕ್ಷಿ ಹೇಳಿಕೆಯನ್ನು ನನ್ನ ಉಕ್ತಲೇಖನಕ್ಕೆ ಬೆರಳಚ್ಚು ಪರಿಸಲಾಯಿತು.)**

**ಓ.ಹೇ.ಕೇ. ಸರಿ ಇದೆ.**

**01 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಜೆಎಂಎಫ್ ಸಿ,**

**ಚನ್ನಗಿರಿ.**